ರಾಯಚೂರಿನಲ್ಲಿ ಬಿಜೆಪಿ ಕಾರ್ಯಕರ್ತರ ಮಾರಾಮಾರಿ

ಮುಜುಗರಕ್ಕೆ ಒಳಗಾದ ರಾಜ್ಯ ನಾಯಕರು

ರಾಯಚೂರು: ಬಿಜೆಪಿ ರಾಜ್ಯ ಚುನಾವಣಾ ಉಸ್ತುವಾರಿ ರಾಧಾ ಮೋಹನದಾಸ್ ಅಗರವಾಲ್ ಸಮ್ಮುಖದಲ್ಲಿ ನಗರದ ಖಾಸಗಿ ಹೋಟೆಲ್‌ನಲ್ಲಿ ನಡೆದ ಸಭೆಯಲ್ಲಿ ಹಾಲಿ ಸಂಸದ ರಾಜಾ ಅಮರೇಶ್ವರ ನಾಯಕ ಹಾಗೂ ಮಾಜಿ ಸಂಸದ, ಬಿಜೆಪಿ ಟಿಕೆಟ್ ಆಕಾಂಕ್ಷಿ ಬಿ.ವಿ.ನಾಯಕ ಬೆಂಬಲಿಗರ ನಡುವೆ ಮಾರಾಮಾರಿ ನಡೆದಿದೆ. ಇದರಿಂದ ರಾಜ್ಯ ಬಿಜೆಪಿ ನಾಯಕರು ಮುಜುಗರಕ್ಕೆ ಒಳಗಾದರು. ಪಕ್ಷದೊಳಗಿನ ಅಸಮಾಧಾನ ಕಡಿಮೆ ಮಾಡಲು ಕರೆದಿದ್ದ ಬಿಜೆಪಿ ಮುಖಂಡರ ಸಭೆಗೆ ಮಾಜಿ ಸಂಸದ ಬಿ.ವಿ.ನಾಯಕ ಅವರ ಬೆಂಬಲಿಗರು ಬಿ.ವಿ.ನಾಯಕ ಪರ ಜೈಕಾರ ಹಾಕುತ್ತ ಬಂದರು. ಅಷ್ಟೇ ಅಲ್ಲ ಗೋ ಬ್ಯಾಕ್ ರಾಜಾ ಅಮರೇಶ್ವರ ನಾಯಕ ಘೋಷಣೆ ಕೂಗಿದರು. ಇದು ಹಾಲಿ ಸಂಸದ ರಾಜಾ ಅಮರೇಶ್ವರ ನಾಯಕ ಬೆಂಬಲಿಗರನ್ನು ಕೆರಳಿಸಿತು. ಅಮರೇಶ್ವರ ನಾಯಕ ಬೆಂಬಲಿಗರು ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದರಿಂದ ಸಭೆಯಲ್ಲಿ ಪರಸ್ಪರ ವಾಗ್ವಾದ ನಡೆಯಿತು. ಕಾರ್ಯಕರ್ತರು ತಮ್ಮ ನಾಯಕರ ಪರ ಘೋಷಣೆ ಕೂಗಿದ್ದರಿಂದ ಪರಸ್ಪರ ತಳ್ಳಾಟ ನೂಕಾಟ ನಡೆಯಿತು. ಸಭೆಯಲ್ಲಿ ಆತಂಕ ಹಾಗೂ ಗೊಂದಲದ ವಾತಾವರಣ ನಿರ್ಮಾಣವಾಯಿತು. ಬಿ.ವಿ.ನಾಯಕರಿಗೆ ಆರಂಭದಲ್ಲಿ ಟಿಕೆಟ್ ಭರವಸೆ ಕೊಟ್ಟು ಕೊನೆ ಕ್ಷಣದಲ್ಲಿ ನಿರಾಕರಿಸಿದ್ದರಿಂದ ಕಾರ್ಯಕರ್ತರು ಆಕ್ರೋಶಗೊಂಡಿದ್ದರು.

ಮೈದಾನ ಸ್ವಚ್ಛಗೊಳಿಸಿದ ಯದುವೀರ್ ದಂಪತಿ

ಮೈಸೂರು: ಬಿಜೆಪಿಯ ಲೋಕಸಭಾ ಅಭ್ಯರ್ಥಿ ಯದುವೀರ ಒಡೆಯರ್ ವಿಜಯ ಸಂಕಲ್ಪ ಸಮಾವೇಶ ನಡೆದ ಜಾಗದಲ್ಲಿ ಕಸ ತೆಗೆದಿದ್ದಾರೆ.

ಭಾನುವಾರ ಮಹಾರಾಜ ಕಾಲೇಜು ಮೈದಾನದಲ್ಲಿ ನಡೆದ ಸಮಾವೇಶದಲ್ಲಿ ಬಿಜೆಪಿ-ಜೆಡಿಎಸ್‌ನ ಸುಮಾರು 60 ಸಾವಿರಕ್ಕೂ ಅಧಿಕ ಕಾರ್ಯಕರ್ತರು ಭಾಗವಹಿಸಿದ್ದರು. ಯದುವೀರ ಒಡೆಯರ್ ಪರವಾಗಿ ಪ್ರಧಾನಿ ನರೇಂದ್ರ ಮೋದಿ ಮತ್ತು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಪ್ರಚಾರ ನಡೆಸಿದ್ದರು.

ಸೋಮವಾರ ಬೆಳಗ್ಗೆ ಮೈದಾನದಲ್ಲಿ ಸ್ವಚ್ಛತಾ ಕಾರ್ಯ ನಡೆಸುತ್ತಿದ್ದರು. ಈ ವೇಳೆ ಯದುವೀರ್ ಹಾಗೂ ಪತ್ನಿ ತ್ರಿಷಿಕಾ ಅವರು ಮಾಸ್ಕ್ ಧರಿಸಿ ಬಿದ್ದಿದ್ದ ಕಸವನ್ನು ತೆಗೆದಿದ್ದಾರೆ. ಈ ಮೂಲಕ ನಾನು ಮಹಾರಾಜ ಅಲ್ಲ ಸಾಮಾನ್ಯ ಪ್ರಜೆ ಎಂಬುದನ್ನು ಸಾಬೀತು ಪಡಿಸಿದರು. ಯದುವೀರ್‌ಗೆ ಸ್ಥಳೀಯರು ಸಾಥ್ ನೀಡಿದರು.

ಮೈಸೂರು ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಒಡೆಯರ್ ಹಾಗೂ ಪತ್ನಿ ತ್ರಿಷಿಕಾ ಅವರು ಬಿಜೆಪಿ ವಿಜಯ ಸಂಕಲ್ಪ ಸಮಾವೇಶ ನಡೆದ ಜಾಗದಲ್ಲಿ ಬಿದ್ದ ಕಸ ತೆಗೆದರು.

ಧರ್ಮ ಯುದ್ಧಕ್ಕೆ ಎಲ್ಲ ಸಮಾಜದವರ ಬೆಂಬಲ

ನನ್ನ ಬೆಂಬಲಿಸುವವರಿಗೆ ಬೆದರಿಕೆ: ದಿಂಗಾಲೇಶ್ವರ ಶ್ರೀ

ಹುಬ್ಬಳ್ಳಿ: ಮನೆಗೆ ಹೋದರೂ ಮಾತನಾಡಿಸದಂತಹ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿಯವರು ಇದೀಗ ಕರೆದು ಮಾತನಾಡಿಸುತ್ತಿದ್ದಾರೆ, ಎಲ್ಲ ಸಮಾಜಗಳೊಂದಿಗೆ ಸಭೆ ಮಾಡುತ್ತಿದ್ದಾರೆ ಎಂದರೆ ಅವರಿಗೆ ಸೋಲಿನ ಭಯ ಕಾಡಿದಂತೆ ಕಾಣುತ್ತಿದೆ ಎಂದು ದಿಂಗಾಲೇಶ್ವರ ಸ್ವಾಮೀಜಿ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ನಾನು ಆರಂಭಿಸಿರುವ ಧರ್ಮ ಯುದ್ಧಕ್ಕೆ ಎಲ್ಲ ಸಮಾಜದವರು ಬೆಂಬಲ ನೀಡಿದ್ದಾರೆ. ನನ್ನ ಪರ ಒಲವು ತೋರುವವರನ್ನು ಹೆದರಿಸಿ ಬೆದರಿಸುವ ಕೆಲಸ ನಡೆದಿದೆ. ಏ.18ರಂದು ಪಕ್ಷೇತರರಾಗಿ ನಾಮಪತ್ರ ಸಲ್ಲಿಕೆ ಮಾಡಲಿದ್ದು ಮಠಾಧೀಶರು ಭಾಗಿಯಾಗುವುದು ಬೇಡ ಎಂದಿದ್ದೇನೆ. ಒಂದು ಮಠದ ಸಮಸ್ಯೆಗಾಗಿ ನಾನು ಸ್ಪರ್ಧಿಸುತ್ತಿಲ್ಲ, ನಾಡಿನ ಹಿತಕ್ಕಾಗಿ ನಿಂತಿದ್ದೇವೆ. ನಮ್ಮ ಬೆಂಬಲಿಗರನ್ನು ಹೆದರಿಸುವ, ಬೆದರಿಸುವ ಕೆಲಸ ಮಾಡುತ್ತಿದ್ದಾರೆ, ಭಯವನ್ನುಂಟು ಮಾಡುತ್ತಿದ್ದಾರೆ, ಆದರೆ ಭಕ್ತರು ನಾವೆಲ್ಲರೂ ಒಳಗಿಂದಲೊಗೆ ಎಲ್ಲ ಕೆಲಸ ಮಾಡುತ್ತಿದ್ದೇವೆ ಎಂದು ಹೇಳುತ್ತಿದ್ದಾರೆ. ಜನರ ಮನವೂಲಿಸುವ ಕೆಲಸ ಮಾಡಬೇಕೆ, ಹೊರತು, ಹೆದರಿಸಿ, ಬೆದರಿಸುವ ಕೆಲಸ ಮಾಡಬಾರದು ಎಂದರು.

ಸಮಾಚಾರ ಸಣ್ಣದಲ್ಲ

ಒಂಟಿ ಸಲಗ ದಾಳಿಗೆ ವ್ಯಕ್ತಿ ಸಾವು

ಕೊಡಗು: ಪೊನ್ನಂಪೇಟೆ ತಾಲೂಕಿನ ಬೀರುಗ ಗ್ರಾಮದಲ್ಲಿ ಸೋಮವಾರ ಮುಂಜಾನೆ ಅಯ್ಯಮಾಡ ಮಾದಯ್ಯ(50) ಎಂಬುವವರು ಕಾಡಾನೆ ದಾಳಿಗೆ ಸಿಲುಕಿ ಮೃತಪಟ್ಟಿದ್ದಾರೆ.ರಸ್ತೆಯಲ್ಲಿ ಅವರು ನಡೆದು ಕೊಂಡು ಹೋಗುವಾಗ ಕಾಡಾನೆ ದಾಳಿ ನಡೆಸಿದೆ. ಇದರಿಂದ ತೀವ್ರವಾಗಿ ಗಾಯಗೊಂಡ ಅವರು ಸ್ಥಳದಲ್ಲೇ ಮೃತಪಟ್ಟರು ಎಂದು ಶ್ರೀಮಂಗಲದ ವನ್ಯ ಜೀವಿ ವಿಭಾಗದ ವಲಯ ಅರಣ್ಯಾಧಿಕಾರಿ ಅರವಿಂದ್ ತಿಳಿಸಿದ್ದಾರೆ. ನಿರಂತರವಾಗಿ ಹೆಚ್ಚುತ್ತಿರುವ ಕಾಡಾನೆ ದಾಳಿಗೆ ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಘಟನಾ ಸ್ಥಳಕ್ಕೆ ಪೊಲೀಸರು ಹಾಗೂ ಅರಣ್ಯಾಧಿಕಾರಿಗಳು ತೆರಳಿದ್ದಾರೆ. ಇದೇ ಗ್ರಾಮದ ವ್ಯಾಪ್ತಿಯಲ್ಲಿ ಕಾಡಾನೆ ಸಂಚರಿಸುತ್ತಿದ್ದು ಗ್ರಾಮಸ್ಥರಲ್ಲಿ ಆತಂಕ ಮೂಡಿದೆ.

ಅಂಬೇಡ್ಕರ್ ಜಯಂತಿ ವೇಳೆ ಯುವಕನ ಕೊಲೆ

ಕಲಬುರಗಿ: ನಗರದಲ್ಲಿ ಭಾನುವಾರ ರಾತ್ರಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿಯ ಮೆರವಣಿಗೆ ವೇಳೆ ಯುವಕನನ್ನು ಚಾಕುವಿನಿಂದ ಇರಿದು ಕೊಲೆ ಮಾಡಿದ ಘಟನೆ ಅಶೋಕ ನಗರ ಪೊಲೀಸ್ ಠಾಣೆ ವ್ಯಾಪ್ತಿಯ ನ್ಯೂ ಜೇವರ್ಗಿ ರಸ್ತೆಯ ರಾಷ್ಟ್ರಪತಿ ಚೌಕ್ ನಲ್ಲಿ ನಡೆದಿದೆ. ಅಶೋಕ ನಗರದ ನಿವಾಸಿ ಆಕಾಶ ಆಂಜನೇಯ (26) ಕೊಲೆಯಾದ ಯುವಕ. ಆತನ ಸ್ನೇಹಿತ ನವೀನ್ ಎಂಬಾತ ಕೊಲೆ ಮಾಡಿ ತಲೆ ಮರೆಸಿಕೊಂಡಿದ್ದಾನೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಆಕಾಶ ಮತ್ತು ನವೀನ್ ಸ್ನೇಹಿತರಾಗಿದ್ದು, ಈ ಹಿಂದೆಯೂ ಗಲಾಟೆ ಮಾಡಿಕೊಂಡು ಮತ್ತೆ ಒಂದಾಗಿ ಒಟ್ಟಿಗೆ ಓಡಾಡುತ್ತಿದ್ದರು. ಭಾನುವಾರ ಬೆಳಗ್ಗೆಯೂ ಯಾವುದೋ ವಿಚಾರಕ್ಕೆ ಜಗಳ ಮಾಡಿಕೊಂಡಿದ್ದರು. ಸ್ಥಳದಲ್ಲಿ ಇದ್ದವರು ಇಬ್ಬರನ್ನೂ ಬಿಡಿಸಿ ಕಳುಹಿಸಿದ್ದರು. ರಾತ್ರಿ ಅಂಬೇಡ್ಕರ್ ಭಾವಚಿತ್ರದ ಮೆರವಣಿಗೆಯ ವೇಳೆ ರಾಷ್ಟ್ರಪತಿ ಚೌಕ್ ನಲ್ಲಿ ಆಕಾಶ ಡ್ಯಾನ್ಸ್ ಮಾಡುತ್ತಿದ್ದ. ಹಿಂದುಗಡೆಯಿಂದ ಬಂದ ನವೀನ್, ಆತನ ಬೆನ್ನಿಗೆ ಚೂರಿ ಹಾಕಿ ಪರಾರಿಯಾದ ಎಂದು ಪೊಲೀಸರು ಮಾಹಿತಿ ನೀಡಿದರು.

ಬಾಡೂಟ ಸೇವಿಸಿದ ಬಾಲಕ ಸಾವು

ಹುಣಸೂರು: ಬಾಡೂಟ ಸೇವಿಸಿದ ನಂತರ ಅತಿಯಾದ ವಾಂತಿ -ಬೇಧಿಯಿಂದ ಬಳಲುತ್ತಿದ್ದ ಸಹೋದರರ ಪೈಕಿ ಅಣ್ಣ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟ ಘಟನೆ ತಾಲೂಕಿನ ಅಬ್ಬೂರಿನಲ್ಲಿ ನಡೆದಿದೆ.

ಮೈಸೂರು ಜಿಲ್ಲೆಯ ಹುಣಸೂರು ತಾಲೂಕಿನ ಅಬ್ಬೂರಿನ ಅಶೋಕ-ಸವಿತ ದಂಪತಿಯ ಮೊದಲ ಪುತ್ರ ಪ್ರದೀಪ್‌ಕುಮಾರ್ (12) ಮೈಸೂರಿನ ಚೆಲುವಾಂಬ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದರೆ, ಈತನ ಸಹೋದರ ರಜತ್‌ಕುಮಾರ್ ಚೇತರಿಸಿಕೊಳ್ಳುತ್ತಿದ್ದಾನೆ.

ಆಗಿದ್ದೇನು?

ಯುಗಾದಿ ಮರುದಿನ ಮಾಂಸದ ಅಡುಗೆ ಮಾಡಿದ್ದರು. ಮನೆಯವರೊಂದಿಗೆ ಸಹೋದದರು ಸಹ ಮಾಂಸದೂಟ ಸೇವಿಸಿದ್ದ ಪ್ರದೀಪ್‌ಕುಮಾರ್ ಮತ್ತು ರಜತ್‌ಕುಮಾರ್ ಸಹೋದರರಿಬ್ಬರಿಗೂ ವಾಂತಿ-ಬೇಧಿ ಕಾಣಿಸಿಕೊಂಡಿತ್ತು. ಚಿಕಿತ್ಸೆಗಾಗಿ ಮೈಸೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಈ ವೇಳೆ ಚಿಕಿತ್ಸೆ ಫಲಕಾರಿಯಾಗದೆ ಪ್ರದೀಪ್ ಕುಮಾರ್ ಕೊನೆಯುಸಿರೆಳೆದಿದ್ದು, ಈತನ ಸಹೋದರ ರಜತ್ ಕುಮಾರ್ ಚೇತರಿಸಿಕೊಳ್ಳುತ್ತಿದ್ದಾನೆ.

ರಾಜ್ಯಕ್ಕೆ ಕೊಡಬೇಕಿರುವ ಅನುದಾನ ಕೊಡಲಿ

← ಮೊದಲಪುಟದಿಂದ

ದೇವಾಲಯಕ್ಕೆ ವಿರೋಧವಿಲ್ಲ; ಆದರೆ ಅದೊಂದೇ ಆಗಬಾರದು

ಬಿಜೆಪಿಗರು ಕಳೆದ ಹತ್ತು ವರ್ಷದಲ್ಲಿ ದೇವಾಲಯ ಕಟ್ಟಿಸಿದೆ, ಪ್ರತಿಮೆ ನಿರ್ಮಿಸಿದೆ ಎನ್ನುವುದರಲ್ಲಿಯೇ ಕಾಲ ಕಳೆದಿದ್ದಾರೆ. ದೇವಾಲಯ ಕಟ್ಟಿಸುವುದಕ್ಕೆ ನಮ್ಮ ವಿರೋಧವಿಲ್ಲ. ಆದರೆ ಅದೊಂದೇ ಕೆಲಸವಾಗಬಾರದು ಎನ್ನುವುದಷ್ಟೇ ನಮ್ಮ ಆಗ್ರಹ. ನಾವು ಹಿಂದೂಗಳು, ನಮಗೂ ದೇವರ ಬಗ್ಗೆ ಭಕ್ತಿಯಿದೆ. ದೇವಾಲಯ ಕಟ್ಟುವುದರಿಂದ ಬಡವರ ಹೊಟ್ಟೆ ತುಂಬುವುದಿಲ್ಲ. ನಾವು ಬಡವರ ಹೊಟ್ಟೆ ತುಂಬಿಸುವ ಕೆಲಸವನ್ನು ಮಾಡುತ್ತಿದ್ದೇವೆ ಎನ್ನುವ ಮಾತನ್ನು ಹೇಳಿದರು.

ವಿರಾಮ
ಪ್ರತಿ ಭಾನುವಾರ

₹3,600 ದಾಟಿದ ಎಚ್‌ಎಎಲ್ ಷೇರು ಮೌಲ್ಯ

ಎಚ್‌ಎಎಲ್ ಮುಚ್ಚಲಾಗುತ್ತಿದೆ ಎನ್ನುವವರಿಗೆ ಇದೇ ಮೋದಿ ಸರಕಾರದ ಉತ್ತರ: ಕೇಂದ್ರ ಸಚಿವ ಎಸ್.ಜೈಶಂಕರ್

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಮುಚ್ಚುತ್ತಾರೆ ಎಂದು ಹೇಳಲಾಗಿದ್ದ ಪ್ರತಿಷ್ಠಿತ ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್‌ಗೆ (ಎಚ್‌ಎಎಲ್) ಈಗ ಅದರ ಸಾಮರ್ಥ್ಯದಷ್ಟು ಉತ್ಪಾದನೆಯ ಕಾರ್ಯಾದೇಶ ನೀಡಲಾಗಿದೆ. ಆ ಕಂಪನಿಯ ಷೇರು ಬೆಲೆ 3,600 ರು.ಗಿಂತ ಹೆಚ್ಚಾಗಿದೆ ಎಂದು ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಎಸ್.ಆರ್.ಜೈಶಂಕರ್ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ಸರಕಾರ ಎಚ್‌ಎಎಲ್, ಬಿಇಎಲ್, ಬಿಇಎಂಎಲ್ ಸೇರಿದಂತೆ ಸರಕಾರಿ ಸ್ವಾಮ್ಯದ ಸಂಸ್ಥೆಗಳ ಅಭಿವೃದ್ಧಿಗೆ ಸಾಕಷ್ಟು ಕ್ರಮ ಕೈಗೊಂಡಿದೆ. ಎಚ್‌ಎಎಲ್ ಅಂತೂ ತನ್ನ ಸಾಮರ್ಥ್ಯದ ಪೂರ್ಣ ಪ್ರಮಾಣದಲ್ಲಿ ಉತ್ಪಾದನಾ ಬೇಡಿಕೆ ಪಡೆದುಕೊಂಡಿದೆ ಎನ್ನುವ ಮೂಲಕ ಈ ಹಿಂದೆ ಬಿಜೆಪಿ ಸರಕಾರದ ಅವಧಿಯಲ್ಲಿ ಎಚ್‌ಎಎಲ್ ಮುಚ್ಚುತ್ತದೆ ಎಂದು ಹೇಳಿದ್ದ ಕಾಂಗ್ರೆಸ್ ನಾಯಕರಿಗೆ ಪರೋಕ್ಷವಾಗಿ ತಿರುಗೇಟು ನೀಡಿದರು.

ಯುಪಿಎ ಅವಧಿಯಲ್ಲಿ ನಿರ್ಲಕ್ಷ್ಯಕ್ಕೆ ಒಳಗಾಗಿದ್ದ ಉತ್ಪಾದನೆ ಮತ್ತು ಮೂಲ ಸೌಕರ್ಯ ಕ್ಷೇತ್ರಕ್ಕೆ ನಮ್ಮ ಸರಕಾರ ಆದ್ಯತೆ ನೀಡಿದ್ದರಿಂದಲೇ ದೇಶ ಇಂದು ಜಾಗತಿಕ ಮಟ್ಟದಲ್ಲಿ 5ನೇ ಆರ್ಥಿಕತೆ ರಾಷ್ಟ್ರ ಎಂಬ ಖ್ಯಾತಿಗೆ ಪಾತ್ರವಾಗಿದೆ ಎಂದು ಹೇಳಿದ ಅವರು, ಕೇಂದ್ರ ಸರಕಾರದ ಯೋಜನೆಗಳು, ಆರ್ಥಿಕ ಸ್ಥಿತಿಗತಿ ಮುಂತಾದ ಅಂಶಗಳ ಬಗ್ಗೆ ಮಾಹಿತಿ ನೀಡಿದರಲ್ಲದೆ, ಈ ಎಲ್ಲಾ ಕ್ರಮಗಳಿಂದ ಸುರಕ್ಷಿತ ಭಾರತವಾಗಿ ಪ್ರಗತಿ ಹೊಂದುತ್ತಿದೆ ಎಂದರು.

ದೇಶದ ಒಳಗಷ್ಟೇ ಅಲ್ಲ, ದೇಶದ ಹೊರಗೆ ಕೂಡ ಮೋದಿ ಗ್ಯಾರಂಟಿ ಸಾಬೀತಾಗಿದೆ. ಇರಾನ್ ಸರಕಾರದ ಜತೆ ಭಾರತೀಯರ ಬಿಡುಗಡೆ ಬಗ್ಗೆ ಮಾತನಾಡಿದ್ದೇನೆ. ಆದಷ್ಟು ಬೇಗ ಇರಾನ್ ಭಾರತೀಯರನ್ನು ಬಿಡುಗಡೆ ಮಾಡುವ ವಿಶ್ವಾಸ ಇದೆ.

– ಎಸ್.ಆರ್.ಜೈಶಂಕರ್ ವಿದೇಶಾಂಗ ಸಚಿವ

ನಮ್ಮ ಬೆಳವಣಿಗೆಯೇ ಕಾಂಗ್ರೆಸ್‌ಗೆ ಚಿಂತೆ

ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಬಿಜೆಪಿ ಮತ್ತು ಎನ್‌ಡಿಎ ಬೆಳವಣಿಗೆಯಾಗುತ್ತಿರುವುದೇ ಕಾಂಗ್ರೆಸ್‌ಗೆ ಬಹುದೊಟ್ಟ ಚಿಂತೆಯಾಗಿದೆ. ಈ ಹಿಂದೆ ಪ್ರಧಾನಿ ಮೋದಿ ಅವರ ನೇತೃತ್ವದಲ್ಲಿ ಎನ್‌ಡಿಎ 300 ಸ್ಥಾನ ದಾಟಿದ್ದನ್ನು ದೇಶ ನೋಡಿದೆ. ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಎನ್‌ಡಿಎ ಬಲ 400 ದಾಟುವುದನ್ನು ದೇಶ ನೋಡಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ, ಅವರು, ಪ್ರಧಾನಿ ಮೋದಿಯವರ ಕೈ ಬಲಪಡಿಸಲು ಕರ್ನಾಟಕದ ಜನರೂ ಕೈಜೋಡಿಸಿ ಹೆಚ್ಚು ಸ್ಥಾನಗಳನ್ನು ಗೆಲ್ಲಿಸಿಕೊಡಲಿದ್ದಾರೆ ಎಂದು ಹೇಳಿದರು.

ಬಿಜೆಪಿ ಚುನಾವಣಾ ಪ್ರಣಾಳಿಕೆ ಸಂಕಲ್ಪ ಪತ್ರವನ್ನು ಬಿಡುಗಡೆ ಮಾಡಿದೆ. ಅದರಲ್ಲಿ ವಿಕಸಿತ ಮತ್ತು ಸುರಕ್ಷಿತ ಭಾರತದ ಬಗ್ಗೆ ಹೇಳಿದ್ದೇವೆ. ಪ್ರಧಾನಿ ಮೋದಿ ಗ್ಯಾರಂಟಿ ಬಗ್ಗೆಯೂ ಪ್ರಸ್ತಾಪಿಸಿದ್ದೇವೆ. ಸಂಕಲ್ಪ ಪತ್ರದಲಿ ಹತ್ತು ವರ್ಷಗಳ ಸಾಧನೆಯ ಜತೆಗೆ ಮುಂದಿನ ಐದು ವರ್ಷಗಳಲ್ಲಿ ಜಾರಿಗೊಳಿಸುವ ಯೋಜನೆಗಳು ಮತ್ತು 25 ವರ್ಷಗಳಲ್ಲಿ ಭಾರತ ಸಾಗಲಿರುವ ದಾರಿಯ ನೀಲನಕ್ಷೆಯನ್ನೂ ನೀಡಲಾಗಿದೆ ಎಂದು ತಿಳಿಸಿದರು.

ಬರ ಪರಿಹಾರ: ಆಯೋಗದ ಅನುಮತಿ ಕೇಳಲಾಗಿದೆ

ರಾಜ್ಯಕ್ಕೆ ಬರ ಪರಿಹಾರ ಬಿಡುಗಡೆ ವಿಳಂಬದ ಕುರಿತು ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಕೇಂದ್ರ ಸಚಿವ ಎಸ್.ಆರ್.ಜೈಶಂಕರ್, ಕೇವಲ ಕರ್ನಾಟಕ ಮಾತ್ರವಲ್ಲ ಹಲವು ರಾಜ್ಯಗಳಿಗೆ ಎನ್‌ಡಿಆರ್‌ಎಫ್ ಅಡಿ ಬರ ಪರಿಹಾರ ಬಿಡುಗಡೆ ಬಾಕಿ ಇದೆ. ಪರಿಹಾರದ ಬಿಡುಗಡೆಗೆ ಚುನಾವಣಾ ಆಯೋಗದ ಅನುಮತಿ ಕೇಳಲಾಗಿದೆ. ಈಗ ಈ ವಿಚಾರ ಚುನಾವಣಾ ಆಯೋಗದ ಅಂಗಳದಲ್ಲಿದೆ. ಕೇಂದ್ರ ಸರಕಾರದಿಂದ ಪ್ರಕೃತಿ ವಿಕೋಪ ಪರಿಹಾರ ಬಿಡುಗಡೆಗೆ ತನ್ನದೇ ಆದ ಮಾನದಂಡ, ನಿಯಮಗಳಿವೆ. ಆದರಂತೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ವಿದೇಶಾಂಗ ಸಚಿವ ಎಸ್.ಆರ್.ಜೈಶಂಕರ್ ತಿಳಿಸಿದರು.

- ಯುಪಿಎ ಅವಧಿಯಲ್ಲಿ ನಿರ್ಲಕ್ಷ್ಯಕ್ಕೆ ಉತ್ಪಾದನೆ, ಮೂಲ ಸೌಕರ್ಯ ಕ್ಷೇತ್ರ
- ಬಿಜೆಪಿ ಆಡಳಿತದಿಂದ ಜಾಗತಿಕ ಮಟ್ಟದಲ್ಲಿ 5ನೇ ಆರ್ಥಿಕತೆ ರಾಷ್ಟ್ರದ ಖ್ಯಾತಿ ಭಾರತಕ್ಕಿದೆ
- 2019ರಲ್ಲಿ ಎನ್‌ಡಿಎ ಬಲ 300, ಈ ಬಾರಿ 400 ದಾಟುವುದನ್ನು ನೋಡುವರು

ಅತಿ ಹೆಚ್ಚು ಮತಗಳ ಅಂತರದಿಂದ ಗೆಲ್ಲುವೆ

ಮೋದಿಯವರ ಹೆಸರಿನೊಂದಿಗೆ ನಮ್ಮ ಸಾಧನೆಯೂ ಹೇಳುತ್ತೇವೆ: ಬೊಮ್ಮಾಯಿ

ಹಾವೇರಿ: ಈ ಚುನಾವಣೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಹೆಸರಿನೊಂದಿಗೆ ಕೇಂದ್ರ ಸರಕಾರ ಹಾಗೂ ನಮ್ಮ ಅವಧಿಯ ಸಾಧನೆಗಳನ್ನು ಜನರಿಗೆ ತಿಳಿಸುತ್ತೇವೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ನಾಮಪತ್ರ ಸಲ್ಲಿಸಿ ಸುದ್ದಿಗಾರರೊಂದಿಗೆ ಮಾತನಾಡಿ, ಇವತ್ತು ಒಳ್ಳೆಯ ಮುಹೂರ್ತ ಇದೆ. ಎರಡು ಸೆಟ್ ನಾಮಪತ್ರ ಸಲ್ಲಿಸಿದ್ದೇನೆ. ಏಪ್ರಿಲ್ 19ರಂದು ಬೃಹತ್ ಮೆರವಣಿಗೆಯೊಂದಿಗೆ ನಾಮಪತ್ರ ಸಲ್ಲಿಸುವೆ. ಅವತ್ತು ನಮ್ಮ ನಾಯಕರಾದ ಯಡಿಯೂರಪ್ಪ, ಬೈರತಿ ಬಸವರಾಜ ಸೇರಿ ಹಲವು ನಾಯಕರು ಬರುತ್ತಾರೆ. ಇವತ್ತು ಶುಭ ಘಳಿಗೆಯಲ್ಲಿ ನಾಮಪತ್ರ ಸಲ್ಲಿಸಿರುವೆ. ಅತಿ ಹೆಚ್ಚು ಮತಗಳ ಅಂತರಗಳಲ್ಲಿ ಗೆಲ್ಲುವ ಆತ್ಮವಿಶ್ವಾಸ ಇದೆ ಎಂದು ಹೇಳಿದರು.

ಈ ಚುನಾವಣೆಯಲ್ಲಿ ಬಿಜೆಪಿಯವರು ಕೇವಲ ಪ್ರಧಾನಿ ನರೇಂದ್ರ ಮೋದಿ ಹೆಸರು ಹೇಳುತ್ತಿದ್ದಾರೆ ಎಂಬ ಪ್ರತಿಪಕ್ಷಗಳ ಆರೋಪಕ್ಕೆ ತಿರುಗೇಟು ನೀಡಿದ ಅವರು, ಇದು ಲೋಕಸಭಾ ಚುನಾವಣೆ, ರಾಷ್ಟ್ರದ ಚುನಾವಣೆ.ಮೋದಿಯವರ ಹೆಸರು ಹೇಳಲೇಬೇಕು ಹೇಳುತ್ತೇವೆ.

ತುಂಗಾ ಮೇಲ್ದಂಡೆ ಯೋಜನೆಯಲ್ಲಿ ಒಂದು ಲಕ್ಷ ಎಕರೆ ನೀರಾವರಿ ಮಾಡಿರುವುದು ಸಾಮಾನ್ಯ ಮಾತಲ್ಲ. ಇದರಿಂದ ಹಾನಗಲ್, ಹಿರೇಕೆರೂರು, ರಾಣೆಬೆನ್ನೂರು ತಾಲೂಕುಗಳಲ್ಲಿ ನೀರಾವರಿಯಾಗಿದೆ. ಈ ಕೆಲಸ ಸಾಧ್ಯವಿಲ್ಲ ಎಂದು ಹೇಳಿದ್ದರು. ಅದನ್ನು ಮಾಡಿ ತೋರಿಸಿದ್ದೇನೆ. ಶಿಗ್ಗಾಂವಿ ಕ್ಷೇತ್ರ ಬಿಟ್ಟು ಎಂಟು ಏತ ನೀರಾವರಿ ಯೋಜನೆ ಮಾಡಿದ್ದೇನೆ.

-ಬಸವರಾಜ ಬೊಮ್ಮಾಯಿ ಮಾಜಿ ಸಿಎಂ

ಬಸವರಾಜ ಬೊಮ್ಮಾಯಿಯವರು ನಾಮಪತ್ರ ಸಲ್ಲಿಕೆಗೂ ಮೊದಲು ಹುಬ್ಬಳ್ಳಿಯ ರಾಯಾಪುರ ಬಳಿ ಇರುವ ಅವರ ತಂದೆ ತಾಯಿಯ ಗದ